# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕಂದಾಯ ಸಚಿವರು

ಪತ್ರಿಕೆಯ ಹೆಸರು : NAME OF THE NEWS PAPER: ಕನ್ನಡಪ್ರಭ   ದಿನಾಂಕ : DATE : 27/1/21

ಅಶೋಕ ಪಿಎ ಗಂಗಾಧರ್ ವಿರುದ್ಧ ಶೃಂಗೇರೀಲಿ ದೂರು

# ಹಣಕ್ಕಾಗಿ ಬೇಡಿಕೆ ಇಟ್ಟ ಸಚಿವ ಅಶೋಕ್ ಪಿಎ: ದೂರು ದಾಖಲು

• ಕನ್ನಡಪ್ರಭವಾರ್ತೆ ಶೃಂಗೇರಿ

ಕಂದಾಯ ಸಚಿವ ಆರ್.ಅಶೋಕ ಅವರ ಆಪ್ತ ಸಹಾಯಕ ಗಂಗಾಧರ್ ವಿರುದ್ಧ ಶೃಂಗೇರಿ ಉಪ ನೋಂದಣಾಧಿಕಾರಿಗೆ ಹಣಕ್ಕಾಗಿ ಬೇಡಿಕೆ ಇಟ್ಟ ಆರೋಪ ಕೇಳಿಬಂದಿದೆ. ಈ ಸಂಬಂಧ ಶೃಂಗೇರಿ ಠಾಣೆ ಸೋಮವಾರ ಪ್ರಕರಣವೂ ದಾಖಲಾಗಿದೆ.

ಶೃಂಗೇರಿ ಉಪ ನೋಂದಣಾಧಿಕಾರಿ ಚೆಲುವರಾಜುರಿಂದ ದೂರು

ಅಶೋಕ ಅವರ ಚಿಕ್ಕಮಗಳೂರು ಪ್ರವಾಸ ವೇಳೆ ಈ ಘಟನೆ ನಡೆದಿದ್ದು, ಗಂಗಾಧರ್ ಜತೆಗಿನ ಮೊಬೈಲ್ ಸಂಭಾಷಣೆ ಮತ್ತು ಅವರು ಶೃಂಗೇರಿಗೆ ಭೇಟಿ ನೀಡಿದ್ದ ಸಂದರ್ಭದಲ್ಲಿನ ಫೋಟೋಗಳನ್ನು ದೂರಿನ ಜತೆಗೆ ಉಪ ನೋಂದಣಾಧಿಕಾರಿ ಎಚ್.ಎಸ್. ಚೆಲುವರಾಜು ಅವರು ಪೊಲೀಸರಿಗೆ ಸಲ್ಲಿಸಿದ್ದಾರೆ.

**ಆರೋಪ ಏನು?:** ಜ.20 ರಂದು ಗಂಗಾಧರ್ ಅವರು ಚೆಲುವರಾಜು ಅವರ ಖಾಸಗಿ ಮೊಬೈಲ್‌ಗೆ ಆರ್. ಅಶೋಕ ಅವರ ಶೃಂಗೇರಿ ಪ್ರವಾಸದ ವೇಳಾಪಟ್ಟಿ ಹಾಕಿದ್ದರು. 24ರಂದು ಬೆಳಗ್ಗೆ 10ಕ್ಕೆ ಗಂಗಾಧರ್ ಅವರು ಚೆಲುವರಾಜು ಅವರಿಗೆ ಕರೆ ಮಾಡಿ ಸಂಜೆ ಸಚಿವರು ಶೃಂಗೇರಿಯ ಆದಿಚುಂಚನಗಿರಿ ಸಮುದಾಯ ಭವನಕ್ಕೆ ಬರುತ್ತಾರೆ, ಆಗ ಬಂದು ಭೇಟಿ ಮಾಡುವಂತೆ ತಿಳಿಸಿದ್ದಾರೆ. ಅದೇ ದಿನ ಸಂಜೆ 7 ಗಂಟೆ ವೇಳೆಗೆ ಸಮುದಾಯ ಭವನಕ್ಕೆ ಹೋಗಿದ್ದಾಗ ಗಂಗಾಧರ್ ಹಣಕ್ಕೆ ಭೇಟಿ ಇಟ್ಟಿದ್ದು, ಆಗ ನಾನು ಯಾರಿಗೂ ಈ ರೀತಿ ಹಣ ನೀಡುವ ಅಥವಾ ಯಾರಿಂದಲೂ ಹಣ ಪಡೆಯುವ ಅಭ್ಯಾಸ ಇಲ್ಲವೆಂದು ಸ್ಥಳದಲ್ಲೇ ತಿಳಿಸಿದ್ದೇನೆ. ಇದಕ್ಕೆ ಒಪ್ಪದ ಅವರು ನನ್ನನ್ನು ನೋಡಿಕೊಳ್ಳುತ್ತೇನೆ ಎಂದು ಬೆದರಿಕೆ ಹಾಕಿದ್ದಾರೆ. ಹೀಗಾಗಿ ಸೂಕ್ತ ರಕ್ಷಣೆ ನೀಡುವಂತೆ ಚೆಲುವರಾಜು ದೂರಿನಲ್ಲಿ ಕೋರಿದ್ದಾರೆ.

**ದುಡ್ಡುಕೇಳೋ ಸ್ಥಿತಿ ಬಂದಿಲ್ಲ-ಸಿ.ಟಿ.ರವಿ:** ಈ ಪ್ರಕರಣಕ್ಕೆ ಸಂಬಂಧಿಸಿ ಚಿಕ್ಕಮಗಳೂರಲ್ಲಿ ಪ್ರತಿಕ್ರಿಯಿಸಿರುವ ಬಿಜೆಪಿ ರಾಷ್ಟ್ರೀಯ ಪ್ರಧಾನ ಕಾರ್ಯದರ್ಶಿ ಸಿ.ಟಿ.ರವಿ, ಸಬ್ ರಿಜಿಸ್ಟ್ರಾರ್‌ಗಳಿಂದ ಹಣಕೇಳುವ ಪರಿಸ್ಥಿತಿ ಆರ್.ಅಶೋಕಗೆ ಬಂದಿಲ್ಲ ಎಂದಿದ್ದಾರೆ. ನನಗಿರೋ ಮಾಹಿತಿ ಪ್ರಕಾರ ಆಪ್ತಕಾರ್ಯದರ್ಶಿಯನ್ನು ಆ ಹುದ್ದೆಯಿಂದ ಬಿಡುಗಡೆ ಮಾಡಲಾಗಿದೆ ಎಂದು ಹೇಳಿದ್ದಾರೆ.